# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:23/ಸಂಚಿಕೆ:13 RNI NO.KAR KAN/2003/10452:No./PMG/KA/NK/BM/743/24-26 , ಸೋಮವಾರ ದಿನಾಂಕ: 18-11-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com


## ಅಬಕಾರಿ ಇಲಾಖೆ 700 ಕೋಟಿ ರೂ. ಭ್ರಷ್ಟಾಚಾರ ಆರೋಪ ಕುರಿತು ತನಿಖೆ ನಡೆಸಿ-ಆರ್.ಅಶೋಕ



ಬೆಂಗಳೂರು: ಅಬಕಾರಿ ಇಲಾಖೆಯಲ್ಲಿನ 700 ಕೋಟಿ ರೂ. ಭ್ರಷ್ಟಾಚಾರ ಆರೋಪ ಕುರಿತು ಎಸ್‌ಐಟಿ ರಚನೆ ಮಾಡಿ ತನಿಖೆ ನಡೆಸಿ ಎಂದು ಸರ್ಕಾರಕ್ಕೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಅವರು ಆಗ್ರಹಿಸಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿಂದಿನ ಬಿಜೆಪಿ ಸರ್ಕಾರದ ವಿರುದ್ಧ ಕಾಂಗ್ರೆಸ್ ಹೊರಿಸಿದ್ದ ಶೇ.40ರಷ್ಟು ಕಮಿಷನ್ ಆರೋಪವನ್ನು ಲೋಕಾಯುಕ್ತ ಸಂಸ್ಥೆ ಸುಳ್ಳೆಂದು ಸಾಬೀತು ಮಾಡಿದೆ. ರಾಜ್ಯದ ಜನರಿಗೆ ಶೇ 40 ಪರ್ಸೆಂಟ್ ಸುಳ್ಳು ಹೇಳಿ ಅಧಿಕಾರಕ್ಕೆ ಬಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ 100 ಪರ್ಸೆಂಟ್ ಭ್ರಷ್ಟರಾಗಿದ್ದಾರೆ ಎಂದು ಕಿಡಿಕಾರಿದರು.

ಕಳೆದ 18 ತಿಂಗಳ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ದಿನನಿತ್ಯ ಒಬ್ಬರಲ್ಲ ಒಬ್ಬ ಮಂತ್ರಿ ಲೂಟಿ ಹೊಡೆಯುತ್ತಿದ್ದಾರೆ. ಸಿದ್ದರಾಮಯ್ಯ ತಮ್ಮ 40 ವರ್ಷದ ಜೀವನ ತೆರೆದ ಪುಸ್ತಕ ಅಂದವರು. ಇವತ್ತು ಅವರ ತೆರೆದ ಪುಸ್ತಕ ಪುಟಗಳು ತಿರುವಿದರೆ ಲೂಟಿಯ ಕಪ್ಪು ಚುಕ್ಕೆಗಳೇ ಕಾಣುತ್ತಿವೆ ತಿಳಿಸಿದರು.

ಅಬಕಾರಿ ಇಲಾಖೆಯಲ್ಲಿ ನಡೆದಿರುವ 700 ಕೋಟಿ ರೂ. ಭ್ರಷ್ಟಾಚಾರದ ಬಗ್ಗೆ ಮಹಾರಾಷ್ಟ್ರದ ಚುನಾವಣಾ ಪ್ರಚಾರದ ವೇಳೆ ಪ್ರಧಾನಮಂತ್ರಿ ಮೋದಿ ಪ್ರಸ್ತಾಪ ಮಾಡಿದ್ದಾರೆ. ಸಿದ್ದರಾಮಯ್ಯನವರು ಇದಕ್ಕೆ ಸಾಕ್ಷಿ ಕೊಡಿ ಎಂದು ಕೇಳಿದ್ದಾರೆ. ಅದು ಪ್ರಧಾನಿ ಮೋದಿ ಅವರು ಮಾಡಿರುವ ಆರೋಪವಲ್ಲ. ಕರ್ನಾಟಕ ರಾಜ್ಯ ಮದ್ಯ ಮಾರಾಟಗಾರರ ಸಂಘ ಮಾಡಿರುವ ಆರೋಪ. ಮದ್ಯ ಮಾರಾಟಗಾರರ ಸಂಘ ಬರೆದಿರುವ ಪತ್ರವನ್ನು ಒಮ್ಮೆ ಮುಖ್ಯಮಂತ್ರಿಗಳು ತರಿಸಿಕೊಂಡು ಓದಬೇಕು. ಸಾಕ್ಷಿ ಬೇಕಾದರೆ ಸಿದ್ದರಾಮಯ್ಯನವರು ಮದ್ಯ ಮಾರಾಟಗಾರರ ಸಂಘದ ಆರೋಪದ ತನಿಖೆ ಮಾಡಲು ಮತ್ತೊಂದು ಎ???ಟಿ ರಚಿಸಲಿ ಎಂದು ಸವಾಲು ಹಾಕಿದರು.

ಒಂದು ವೇಳೆ ಮದ್ಯ ಮಾರಾಟಗಾರರು ಮಾಡುತ್ತಿರುವ ಆರೋಪ ಸುಳ್ಳಾದರೆ ಅವರ ಲೈಸೆನ್ಸ್ ರದ್ದು ಮಾಡಿ ಅಂಗಡಿಗಳಿಗೆ ಬೀಗ ಹಾಕಿಸಿ. ತಮ್ಮ ಹೈಕಮಾಂಡ್ ನಾಯಕರನ್ನು ಮೆಚ್ಚಿಸಲು ಕನ್ನಡಿಗರ ತೆರಿಗೆ ಹಣವನ್ನು ಲೂಟಿ ಹೊಡೆಯುತ್ತಿರುವ ಕಾಂಗ್ರೆಸ್ ನಾಯಕರಿಗೆ ಪ್ರಧಾನಿ ಮೋದಿ ಅವರ ಬಗ್ಗೆ ಮಾತನಾಡಲು ಯಾವ ನೈತಿಕತೆ ಇಲ್ಲ ಎಂದು ವಾಗ್ದಾಳಿ ನಡೆಸಿದರು

## ಬೆಳೆಗಾವಿ ಅಧಿವೇಶನ : 1 ಲಕ್ಷಕ್ಕೂ ಅಧಿಕ ರೈತರಿಂದ ಪ್ರತಿಭಟನೆ

ಬೆಂಗಳೂರು : ತಮ್ಮ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಬೆಳಗಾವಿಯಲ್ಲಿ ನಡೆಯುವ ಅಧಿವೇಶನದ ವೇಳೆ ಪ್ರತಿಭಟನೆ ನಡೆಸಲು ರೈತರು ಸಜ್ಜಾಗಿದ್ದು, ಪ್ರತಿಭಟನೆಯಲ್ಲಿ 1 ಲಕ್ಷಕ್ಕೂ ಹೆಚ್ಚು ರೈತರು ಭಾಗವಹಿಸುವ ನಿರೀಕ್ಷೆ ಇದೆ ಎಂದು ಏಕೀಕೃತ ಕರ್ನಾಟಕ ರಾಜ್ಯ ರೈತಸಂಘದ ಸಂಸ್ಥಾಪಕ ಅಧ್ಯಕ್ಷ ಪಚ್ಚೆ ನಂಜುಡಸ್ವಾಮಿ ಅವರು ಭಾನುವಾರ ಹೇಳಿದರು.ರೈತರನ್ನುದ್ದೇಶಿಸಿ ಮಾತನಾಡಿದ ಅವರು, ರೈತರಿಗೆ ಆಗುತ್ತಿರುವ ಅನ್ಯಾಯ, ಕನಿಷ್ಠ ಬೆಂಬಲ ಬೆಲೆ ನಿಗದಿ ಸೇರಿದಂತೆ ಹಲವು ಬೇಡಿಕೆಗಳಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರಕ್ಕೆ ಬಿಸಿ ಮುಟ್ಟಿಸಲು ರೈತರು ಪ್ರತಿಭಟನೆಯಲ್ಲಿ ಪಾಲ್ಗೊಳ್ಳಬೇಕು. ನಡೆಯಲಿರುವ ವಿಧಾನಮಂಡಲ ಅಧಿವೇಶನದಲ್ಲಿ ಮಂಡ್ಯದಿಂದ 10 ಸಾವಿರಕ್ಕೂ ಹೆಚ್ಚು ರೈತರು ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದರು.1980ರ ದಶಕದಲ್ಲಿ ಕಂಪನ ಉಂಟುಮಾಡಿದ್ದ ಕರ್ನಾಟಕ ರಾಜ್ಯ ರೈತ ಸಂಘ ಇತ್ತೀಚಿನ ವರ್ಷಗಳಲ್ಲಿ ತಾತ್ವಿಕ ಭಿನ್ನಾಪ್ರಾಯದಿಂದ ಹಲವು ಬಣಗಳಾಗಿದ್ದು, ಸಂಘಟನೆಯ ಬಲ ಕುಸಿದಿದೆ. ರೈತ ಸಂಘದ ಏಕೀಕರಣದ ಮೂಲಕ ಎಲ್ಲಾ ಬಣಗಳನ್ನು ಒಂದೇ ವೇದಿಕೆಯಲ್ಲಿ ಕರೆತಂದು ಸಂಘಟಿಸಲಾಗುವುದು. ಇದು ಮಹತ್ತರ ಬೆಳವಣಿಗೆಯಾಗಲಿದೆ ಎಂದು ತಿಳಿಸಿದರು.

## ಮುಡಾ ಹಗರಣ:ಪ್ರಾಸಿಕ್ಯೂಷನ್‌ಗೆ ಸರ್ಕಾರ ಅನುಮತಿ, ಲೋಕಾಯುಕ್ತ ನೋಟಿಸ್



ಬೆಂಗಳೂರು: ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದ ಅಕ್ರಮ ನಿವೇಶನ ಹಂಚಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಡಾ ಮಾಜಿ ಆಯುಕ್ತ ಡಿಬಿ ನಟೇಶ್? ಅವರ? ವಿರುದ್ಧ ಪ್ರಾಸಿಕ್ಯೂಷನ್?ಗೆ ರಾಜ್ಯ ಗೃಹ ಇಲಾಖೆ ಅನುಮತಿ ನೀಡಿದೆ.

ರಾಜ್ಯ ಸರ್ಕಾರ ಪ್ರಾಸಿಕ್ಯೂಷನ್?ಗೆ ಅನುಮತಿ ನೀಡಿದ ಬೆನ್ನಲ್ಲೇ ಲೋಕಾಯುಕ್ತ ಪೊಲೀಸರು ಆರೋಪಿ ನಟೇಶ್ ಗೆ ನೋಟಿಸ್ ಜಾರಿ ಮಾಡಿದ್ದು, ಮುಂದಿನ ವಾರ ವಿಚಾರಣೆಗೆ ಹಾಜರಾಗುವಂತೆ ಸೂಚಿಸಲಾಗಿದೆ.

ಸರ್ಕಾರಿ ಅಧಿಕಾರಿ ವಿಚಾರಣೆ ನಡೆಸಲು ಸರ್ಕಾರದ ಅನುಮತಿ ಕಡ್ಡಾಯವಾಗಿದೆ. ಹೀಗಾಗಿ 17(ಎ) ಅಡಿಯಲ್ಲಿ ಲೋಕಾಯುಕ್ತ ಅಧಿಕಾರಿಗಳು ಒಂದು ತಿಂಗಳ ಹಿಂದೆ ಪ್ರಾಸಿಕ್ಯೂಷನ್?ಗೆ ಅನುಮತಿ ಕೋರಿದ್ದರು. ಇದೀಗ ಅನುಮತಿ ನೀಡಿದ್ದು, ನಟೇಶ್ ಅವರಿಗೆ ಮುಂದಿನ ವಾರ ವಿಚಾರಣೆಗೆ ಹಾಜರಾಗುವಂತೆ ಲೋಕಾಯುಕ್ತ ಪೊಲೀಸರು ನೋಟಿಸ್ ಜಾರಿ ಮಾಡಿದ್ದಾರೆ.

ಈ ಹಿಂದೆ ಮುಡಾ ಆಯುಕ್ತರಾಗಿದ್ದ ನಟೇಶ್ ಅವರು, ಸೈಟ್ ಮರು ಹಂಚಿಕೆಯಲ್ಲಿ ಭ್ರಷ್ಟಾಚಾರ ಎಸಗಿದ್ದಾರೆ ಎಂಬ ಆರೋಪ ಎದುರಿಸುತ್ತಿದ್ದಾರೆ. ನಟೇಶ್ ಅವರು ಈಗಾಗಲೇ ಇಡಿ ಅಧಿಕಾರಿಗಳ ಮುಂದೆ ಮೂರು ಬಾರಿ ವಿಚಾರಣೆಗೆ ಹಾಜರಾಗಿದ್ದಾರೆ.

ಇನ್ನು ಇತ್ತೀಚೆಗೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಗರದ ಮಲ್ಲೇಶ್ವರಂನ 10ನೇ ಕ್ರಾಸ್ ನಲ್ಲಿರುವ ನಟೇಶ್ ಮನೆ ಮೇಲೆ ಇಡಿ ಅಧಿಕಾರಿಗಳು ದಾಳಿ ಮಾಡಿದ್ದರು. ಸತತ 33 ಗಂಟೆಗಳ ಕಾಲ ದಾಖಲೆ ಪರಿಶೀಲನೆ ಮಾಡಿ 4 ಬ್ಯಾಗ್ ಕೊಂಡೊಯ್ದಿದ್ದರು. ಬಳಿಕ ಅವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದರು.

## ತನಿಖೆ ಪೂರ್ಣವಾಗುವವರೆಗೂ ತಹಶೀಲ್ದಾರರಿಗೆ ಸೇವೆ ಸಲ್ಲಿಸಲು ಅವಕಾಶ ನೀಡದಿರಿ




ಬೆಳಗಾವಿ : ತಹಶೀಲ್ದಾರ ಕಾರ್ಯಾಲಯದಲ್ಲಿ ಎಸ್.ಡಿ.ಎ ರುದ್ರಣ್ಣ ಯಡವಣ್ಣನವರ ಆತ್ಮಹತ್ಯೆ ಪ್ರಕರಣ ಆರೋಪ ಹೊತ್ತು ಪರಾರಿಯಾಗಿದ್ದ ತಹಶೀಲ್ದಾರರು ಜಾಮೀನು ಪಡೆದು ಬಂದು ಮತ್ತೆ ಅಧಿಕಾರವನ್ನು ನಡೆಸುತ್ತಿದ್ದು ತನಖೆ ಪೂರ್ಣಗೊಳ್ಳುವ ವರೆಗೂ ಸೇವೆ ಸಲ್ಲಿಸಲು ಅವಕಾಶ ನೀಡದಂತೆ ಒತ್ತಾಯಿಸಿ ಇಂದು ಬೆಳಗಾವಿ ತಹಶೀಲ್ದಾರ ಕಾರ್ಯಾಲಯದ ಎದುರು ಕಿತ್ತೂರು ಕರ್ನಾಟಕ ಸೇನೆಯ ವತಿಯಿಂದ ಪ್ರತಿಭಟನೆಯನ್ನು ನಡೆಸಲಾಯಿತು.

ಬೆಳಗಾವಿ ತಹಶೀಲ್ದಾರ ಕಾರ್ಯಾಲಯದಲ್ಲಿ ಎಸ್.ಡಿ.ಎ ರುದ್ರಣ್ಣ ಯಡವಣ್ಣನವರ ಆತ್ಮಹತ್ಯೆ ಪ್ರಕರಣ ಆರೋಪ ಹೊತ್ತು ಪರಾರಿಯಾಗಿದ್ದ ತಹಶೀಲ್ದಾರರು ಜಾಮೀನು ಪಡೆದು ಬಂದು ಇಂದು ಮತ್ತೆ ಸೇವೆಗೆ ಅಣಿಯಾಗಿದ್ದಾರೆ. ಇದನ್ನು ಖಂಡಿಸಿ ಇಂದು ಬೆಳಗಾವಿ ತಹಶೀಲ್ದಾರ ಕಾರ್ಯಾಲಯದ ಎದುರು ಕಿತ್ತೂರು ಕರ್ನಾಟಕ ಸೇನೆಯ ವತಿಯಿಂದ ಘೋಷಣೆಗಳನ್ನು ಕೂಗಿ ಪ್ರತಿಭಟನೆಯನ್ನು ನಡೆಸಲಾಯಿತು.

ಈ ವೇಳೆ ಮಾತನಾಡಿದ ಪ್ರತಿಭಟನಾಕಾರರು ಬೆಳಗಾವಿ ತಹಶೀಲ್ದಾರ ಕಾರ್ಯಾಲಯದಲ್ಲಿ ಎಸ್.ಡಿ.ಎ ರುದ್ರಣ್ಣ ಯಡವಣ್ಣನವರ ಆತ್ಮಹತ್ಯೆ ಪ್ರಕರಣ ಆರೋಪ ಹೊತ್ತು ಪರಾರಿಯಾಗಿದ್ದ ತಹಶೀಲ್ದಾರರು ಜಾಮೀನು ಪಡೆದು ಬಂದು ಮತ್ತೇ ಅಧಿಕಾರವನ್ನು ನಡೆಸುತ್ತಿದ್ದಾರೆ.ಇದು ಖಂಡನೀಯ. ತನಖೆ ಪೂರ್ಣಗೊಳ್ಳುವವರೆಗೂ ತಹಶೀಲ್ದಾರರಿಗೆ ಸೇವೆ ಸಲ್ಲಿಸಲು ಅವಕಾಶ ನೀಡಬಾರದು. ಕಾನೂನಿನ ಮುಂದೆ ಯಾರೂ ದೊಡ್ಡವರಲ್ಲ. ಆದರೇ, ಇಲ್ಲಿ ಜನರಿಗೊಂದು ಅಧಿಕಾರಿಗಳಿಗೊಂದು ಕಾನೂನು ಎಂಬಂತೆ ವರ್ತಿಸಲಾಗುತ್ತಿದೆ, ಸರ್ಕಾರ ಎಚ್ಚೆತ್ತುಕೊಂಡು ಇತ್ತ ಗಮನಹರಿಸದಿದ್ದರೇ ಉಗ್ರ ಹೋರಾಟ ನಡೆಸಲಾಗುವುದೆಂದು ಎಚ್ಚರಿಕೆಯನ್ನು ನೀಡಿದರು. ಈ ವೇಳೆ ಕಿತ್ತೂರು ಕರ್ನಾಟಕ ಸೇನೆಯ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಭಾಗಿಯಾಗಿದ್ದರು....

## ಕಾಂಗ್ರೆಸ್ ನೇತೃತ್ವದ ಸರ್ಕಾರ ಭರವಸೆ ಈಡೇರಿಸುವಲ್ಲಿ ವಿಫಲ-ಪ್ರಹ್ಲಾದ್ ಜೋಶಿ

ಹುಬ್ಬಳ್ಳಿ: ರಾಜ್ಯದ ಆಡಳಿತಾರೂಢ ಕಾಂಗ್ರೆಸ್ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದ್ದು, ಹೀಗಾಗಿ ಪಡಿತರ ಚೀಟಿಗಳನ್ನು ಕಡಿತ ಮಾಡುತ್ತಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯವರು ಕಿಡಿಕಾರಿದ್ದಾರೆ.

ಸುದ್ದಿಗಾರರೊಂದಿಗೆ ಭಾನುವಾರ ಮಾತನಾಡಿದ ಅವರು, ಕಾಂಗ್ರೆಸ್ ನೇತೃತ್ವದ ಸರ್ಕಾರವು ಗ್ಯಾರಂಟಿ ಯೋಜನೆಗಳನ್ನು ನಿರ್ವಹಿ,ಸು ಸಾಧ್ಯವಾಗದ ಕಾರಣ ಒಂದರ ಹಿಂದೆ ಒಂದರಂತೆ ಯೋಜನೆಗಳನ್ನು ಹಿಂಪಡೆಯುತ್ತಿದೆ. ಕಾಂಗ್ರೆಸ್ ಸರಕಾರ 10 ಕೆ.ಜಿ ಅಕ್ಕಿ ಘೋಷಣೆ ಮಾಡಿದರೂ ಭರವಸೆ ಈಡೇರಿಸುವಲ್ಲಿ ವಿಫಲವಾಗಿದೆ. ರಾಜ್ಯದಲ್ಲಿ ಪ್ರಸ್ತುತ ಕೇಂದ್ರ ನೀಡುತ್ತಿರುವ 5 ಕೆಜಿ ಅಕ್ಕಿಯನ್ನು ಮಾತ್ರ ವಿತರಿಸಲಾಗುತ್ತಿದೆ ಎಂದು ಹೇಳಿದರು.

ಕೇಂದ್ರ ಸರ್ಕಾರವು ಆಹಾರ ಭದ್ರತೆಗಾಗಿ ವಾರ್ಷಿಕ 2.11 ಲಕ್ಷ ಕೋಟಿ ರೂಪಾಯಿಗಳನ್ನು ಖರ್ಚು ಮಾಡುತ್ತದೆ, ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆಯಡಿಯಲ್ಲಿ ಶೇ.50ರಷ್ಟು ನಗರ ಮತ್ತು ಶೇ.75ರಷ್ಟು ಗ್ರಾಮೀಣ ಜನರಿಗೆ ಉಚಿತ ಆಹಾರವನ್ನು ಒದಗಿಸುತ್ತದೆ. ಪ್ರತಿಯೊಬ್ಬ ಅರ್ಹ ಪಡಿತರರಿಗೂ 5 ಕೆಜಿ ಅಕ್ಕಿಯನ್ನು ಉಚಿತವಾಗಿ ನೀಡುತ್ತಿದೆ. ಕನಿಷ್ಠ ಬೆಂಬಲ ಬೆಲೆಯಲ್ಲಿ ಗೋಧಿ, ಭತ್ತ ಹಾಗೂ ಇತರೆ ಕೃಷಿ ಉತ್ಪನ್ನಗಳನ್ನು ಖರೀದಿ ಮಾಡಲಾಗುತ್ತಿದೆ. ಇಷ್ಟಾದರೂ ದಿಢೀರನೇ ಬಿಪಿಎಲ್ ಕಾರ್ಡ್ ಏಕೆ ಕಡಿತ ಮಾಡಲಾಗುತ್ತಿದೆ ಎಂಬುದೇ ಅರ್ಥವಾಗುತ್ತಿಲ್ಲ. ಈ ಕುರಿತು ರಾಜ್ಯದ ಆಹಾರ ಸಚಿವರೊಂದಿಗೆ ಚರ್ಚೆ ನಡೆಸುತ್ತೇನೆಂದು ತಿಳಿಸಿದರು.ಬಳಿಕ ಶಕ್ತಿ ಯೋಜನೆಯನ್ನು ಟೀಕಿಸಿದ ಅವರು, ರಾಜ್ಯದ ಹಲವಾರು ಭಾಗಗಳಲ್ಲಿ ಕೆಎಸ್‌ಆರ್‌ಟಿಸಿ ಬಸ್‌ಗಳು ಸೂಕ್ತ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿಲ್ಲ. ಹಲವು ಮಾರ್ಗಗಳಲ್ಲಿ ಸೇವೆ ನಿಲ್ಲಿಸಲಾಗಿದೆ ಎಂದು ಕಿಡಿಕಾರಿದರು.

ಗೃಹ ಲಕ್ಷ್ಮಿ ಯೋಜನೆ ಕುರಿತು ಮಾತನಾಡಿ, ಒಂದು ಕಡೆ ಸರ್ಕಾರ ಸಹಾಯಧನ ನೀಡುತ್ತಿದೆ. ಮತ್ತೊಂದೆಡೆ ವಿದ್ಯುತ್ ದರವನ್ನು ಹೆಚ್ಚಿಸಿದೆ. ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಸಮರ್ಪಕವಾಗಿ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿಲ್ಲ. ಕೊಡಲೂ ಆಗದೆ, ಬಿಡಲೂ ಆಗದ ಸ್ಥಿತಿಯಲ್ಲಿದ್ದು, ಬಹುತೇಕ ಎಲ್ಲಾ ಗ್ಯಾರಂಟಿಗಳು ಅರ್ಧಕ್ಕೆ ನಿಂತಿವೆ. ಇದನ್ನೆಲ್ಲಾ ನೋಡಿದರೆ ಕಾಂಗ್ರೆಸ್ ಸರ್ಕಾರ ಸಂಪೂರ್ಣ ದಿವಾಳಿಯತ್ತ ಮುಖ ಮಾಡಿದೆ ಎಂಬುದು ಗೊತ್ತಾಗುತ್ತಿದೆ ಎಂದು ವಾಗ್ದಾಳಿ ನಡೆಸಿದರು.

## ವಿದ್ಯುತ್ ಸುರಕ್ಷತಾ ಜಾಗೃತಿ ಕಾರ್ಯಾಗಾರ ವಿದ್ಯುತ್ ಸುರಕ್ಷತೆ ದೃಷ್ಟಿಯಿಂದ ತೆಗೆದುಕೊಳ್ಳುವ ಸಣ್ಣ ಕ್ರಮಗಳು ದೊಡ್ಡ ವ್ಯತ್ಯಾಸವನ್ನು ಮಾಡಬಹುದು-ಧರ್ಮರೆಡ್ಡಿ

ಬಳ್ಳಾರಿ, ನ-: ವಿದ್ಯುತ್ ಸುರಕ್ಷತೆ ದೃಷ್ಟಿಯಿಂದ ತೆಗೆದುಕೊಳ್ಳುವ ಸಣ್ಣ ಕ್ರಮಗಳು ದೊಡ್ಡ ವ್ಯತ್ಯಾಸವನ್ನು ಮಾಡಬಹುದು ಎಂದು ಉಪ ವಿದ್ಯುತ್ ಪರಿವೀಕ್ಷಕ ( ಡೆಪ್ಯೂಟಿ ಎಲೆಕ್ಟ್ರಿಕಲ್ ಇನ್ಸ್‌ಪೆಕ್ಟರ್) ಧರ್ಮರೆಡ್ಡಿ ಅವರು ಹೇಳಿದ್ದಾರೆ.

ಗುಲಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಕಾರ್ಯ ಮತ್ತು ಪಾಲನಾ ವಲಯ ಬಳ್ಳಾರಿ ವತಿಯಿಂದ ಬಳ್ಳಾರಿಯ ಕೆ.ಇ.ಬಿ ಇಂಜಿನಿಯರ್ಸ್ ಅಸೋಸಿಯೆಷನ್ ಹಾಲ್‌ನಲ್ಲಿ ಹಮ್ಮಿಕೊಂಡಿದ್ದ ವಿದ್ಯುತ್ ಸುರಕ್ಷತಾ ಜಾಗೃತಿ ಕಾರ್ಯಾಗಾರದಲ್ಲಿ ಮಾತನಾಡಿದ ಅನವರು, ನಮ್ಮ ದೈನಂದಿನ ಜೀವನದಲ್ಲಿ ವಿದ್ಯುತ್ ಅತ್ಯಂತ ಅವಶ್ಯಕವಾಗಿದೆ. ಆದರೆ ವಿದ್ಯುತ್ ಅಜಾಗರೂಕತೆಯಿಂದ ಅವಘಡಗಳು ಸಂಭವಿಸಬಹುದು. ವಿದ್ಯುತ್ ಸುರಕ್ಷತೆಯ ಕುರಿತು ಜಾಗೃತಿ ಮೂಡಿಸುವುದು ಅತ್ಯಂತ ಮುಖ್ಯವಾಗಿದೆ ಎಂದು ಹೇಳಿದರು. ಜತೆಗೆ ಅಪಘಾತಗಳನ್ನು ತಪ್ಪಿಸಲು ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕೆಗಳು, ಲೈನ್‌ಗಳ ಸ್ಟ್ಯಾಂಡರ್ಡ್ ಕ್ಲಿಯರೆನ್ಸ್‌ಗಳನ್ನು ನಿರ್ವಹಿಸುವ ಕುರಿತು ತಿಳಿಸಿದರು.ಎಸಿಇಐ ಚಂದ್ರಶೇಖರ್ ಅವರು ಸಿಇಎ ನಿಯಮಗಳು ಮತ್ತು ನಿಬಂಧನೆಗಳ ಬಗ್ಗೆ ವಿವರಿಸಿದರು. ವಿದ್ಯುತ್ ಪರಿವೀಕ್ಷಕ ಗಿರೀಶ್ ಅವರು ಇತ್ತೀಚಿನ ಅಪಘಾತ ವರದಿಗಳು ಮತ್ತು ಅವುಗಳ ಕಾನೂನು ಪರಿಣಾಮಗಳ ಬಗ್ಗೆ ಮಾಹಿತಿ ನೀಡಿದರು. ಅಪಘಾತಗಳ ತಡೆ, ಲೈನ್‌ಗಳ ನಿರ್ವಹಣೆ, ನಿಲ್ದಾಣಗಳನ್ನು ನಿಯಮಿತವಾಗಿ ನಿರ್ವಹಿಸುವ ಬಗ್ಗೆ ಜೆ.ಎಚ್.ಶ್ರೀನಿವಾಸ್ ವಿವರಿಸಿದರು.

ವಿಜಯಕುಮಾರ್ ಅವರು ಸುರಕ್ಷತಾ ಕ್ರಮಗಳ ಬಗ್ಗೆತಿಳಿಸಿದರು.ಕಾರ್ಯಕ್ರಮದಲ್ಲಿ ಬಳ್ಳಾರಿ ಇನ್‌ಚಾರ್ಜ್ ಸಿಇಇ ಮೊಹಮ್ಮದ್ ಷರೀಫ್ ವೈ., ಬಳ್ಳಾರಿ ಗ್ರಾಮಾಂತರ, ನಗರ ವಿಭಾಗಗಳ ವಿಭಾಗಾಧಿಕಾರಿಗಳು, ಎಂ.ಆರ್.ಟಿ. ಮತ್ತು ಕೆಪಿಟಿಸಿಎಲ್‌ನ ಎಇಇಗಳು ಅಧಿಕಾರಿಗಳು ಹಾಗೂ ಖಾತೆಗಳ ನಿಯಂತ್ರಣಾಧಿಕಾರಿ ಸೂರ್ಯಕಾಂತ, ಡಿಸಿಎ ಸೇರಿದಂತೆ ಬಳ್ಳಾರಿಯ ಲೆಕ್ಕಾಧಿಕಾರಿಗಳು ಉಪಸ್ಥಿತರಿದ್ದರು. ಎಇಇ ಮುಕ್ಕಣ್ಣ ಗೌಡ ಅವರು ನಿರೂಪಣೆ ಮಾಡಿದರು.

## ನದಾಫ/ಪಿಂಜಾರ ಸಂಘದ ಸಮಾವೇಶ ಹಿನ್ನಲೆ ಚನ್ನಮ್ಮ, ಗಾಂಧಿ ಸೇರಿ ಹಲವರ ಮೂರ್ತಿಗಳಿಗೆ ಮಾಲಾರ್ಪಣೆ



ಗದಗ: ಕರ್ನಾಟಕ ರಾಜ್ಯ ನದಾಫ್/ಪಿಂಜಾರ ಸಂಘದ 32 ನೇ ಸಂಸ್ಥಾಪನಾ ದಿನಾಚರಣೆ ಹಾಗೂ ಸಮಾಜದ ರಾಜ್ಯಮಟ್ಟದ ಮಹಿಳಾ ಸಮಾವೇಶ ನಿಮಿತ್ತ ಶನಿವಾರ ನಗರದ ಪ್ರಮುಖ ಬೀದಿಗಳಲ್ಲಿ ಸಮಾಜದ ಮುಖಂಡ ರಾಜೇಸಾಬ ಅಣ್ಣಿಗೇರಿ ಬೈಕ್ ರ್‍ಯಾಲಿ ನಡೆಯಿತು.

ವಿವಿಧ ಪ್ರತಿಮೆಗಳಿಗೆ ಮಾಲಾರ್ಪಣೆ:

ಟಿಪ್ಪುಸುಲ್ತಾನ ವೃತ್ತದಿಂದ ಆರಂಭವಾದ ಬೈಕ್ ರ್‍ಯಾಲಿ, ಅಲ್ಲಿ ಮಾಲಾರ್ಪಣೆ ಮಾಡಿ ಆರಂಭಗೊಂಡಿತು. ಅಲ್ಲಿಂದ ವೀರರಾಣಿ ಕಿತ್ತೂರ ಚನ್ನಮ್ಮಳ ಪ್ರತಿಮೆ, ವಾಲ್ಮೀಕಿ ವೃತ್ತದಲ್ಲಿ ಮಹರ್ಷಿ ವಾಲ್ಮೀಕಿ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಲಾಯಿತು. ಬಳಿಕ ಮಹ್ಮದಅಲಿ ವೃತ್ತದಲ್ಲಿ ಭಾವಚಿತ್ರವಿಟ್ಟು ಗೌರವಿಸಲಾಯಿತು.

ಅಲ್ಲಿಂದ ಕೆ.ಎಚ್. ಪಾಟೀಲ ವೃತ್ತಕ್ಕೆ ಆಗಮಿಸಿ ಮಾಲಾರ್ಪಣೆ ನಡೆಯಿತು. ಈ ವೇಳೆ ಸಂಘದ ರಾಜ್ಯಾಧ್ಯಕ್ಷ ಜಲೀಲಸಾಬ, 32ನೇ ಸಂಸ್ಥಾಪನಾ ದಿನಾಚರಣೆ ಸಮಿತಿ ಅಧ್ಯಕ್ಷ ಕೆ.ಎಫ್. ಹುಲಕೋಟಿ (ರಬ್ಬಾನಿ), ಜಿಲ್ಲಾಧ್ಯಕ್ಷ ಕೆ.ಎಫ್. ಹಳ್ಯಾಳ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ಬಿ. ನದಾಫ, ಖಜಾಂಚಿ ಶೌಕತ್‌ಅಲಿ ಅಣ್ಣಿಗೇರಿ, ಹೊಸಳ್ಳಿ ಇಂಜಿನೀಯರ್ ಸೇರಿ ಸಮಾಜದ ಅನೇಕರು ಇದ್ದರು.

ಅಲ್ಲಿಂದ ಮುಂದುವರಿದ ಬೈಕ್ ರ್‍ಯಾಲಿಯು ಹುಯಿಲಗೋಳ ನಾರಾಯಣರಾವ ವೃತ್ತದಲ್ಲಿ ಮಾಲಾರ್ಪಣೆ ಮಾಡಿ, ತೋಂಟದಾರ್ಯ ಮಠಕ್ಕೆ ತೆರಳಿ, ಲಿಂ.ತೋಂಟದ ಸಿದ್ಧಲಿಂದ ಶ್ರೀಗಳ ಗದ್ದುಗೆಗೆ ಮಾಲಾರ್ಪಣೆ ಮಾಡಿ, ಗೌರವ ಸಲ್ಲಿಸಲಾಯಿತು. ಬಳಿಕ ಮಹಾತ್ಮ ಗಾಂಧಿ ಪ್ರತಿಮೆ, ನಗರಸಭೆ ಆವರಣದಲ್ಲಿರುವ ಡಾ. ಅಂಬೇಡ್ಕರ್, ಸಂಗೊಳ್ಳಿ ರಾಯಣ್ಣ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಭೂಮರಡ್ಡಿ ವೃತ್ತಕ್ಕೆ ತಲುಪಿತು.

ಅಲ್ಲಿ ಕನಕದಾಸರು ಹಾಗೂ ಸಹಕಾರಿ ರಂಗದ ಪಿತಾಮಹ ಸಿದ್ದನಗೌಡ ಪಾಟೀಲರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ, ನಂತರ ಪುಟ್ಟರಾಜರ ಪ್ರತಿಮೆಗೆ ಗೌರವಿಸುವ ಕಾರ್ಯ ನಡೆಯಿತು.

32ನೇ ಸಂಸ್ಥಾಪನಾ ದಿನಾಚರಣೆ ಸಮಿತಿ ಅಧ್ಯಕ್ಷ ಕೆ.ಎಫ್. ಹುಲಕೋಟಿ (ರಬ್ಬಾನಿ), ಶೌಕತಅಲಿ ಅಣ್ಣಿಗೇರಿ, ಅಬ್ದುಲಶರೀಫ ನೂರಭಾಷಾ, ಖಾದರಸಾಬ್ ಹಳ್ಯಾಳ, ಎಂ.ಬಿ ನದಾಫ್, ರಾಜೆಸಾಬ ಶಿಶುವಿನಹಳ್ಳಿ, ಆರ್.ವಾಯ್ ನದಾಫ್, ಎ.ಹೆಚ್ ಹೊಸಳ್ಳಿ, ಆರ್.ಎಂ. ಹೆಬ್ಬಳ್ಳಿ, ಮಹಮ್ಮದರಫಿ ಅಣ್ಣಿಗೇರಿ, ಮೈನುದ್ದಿನ್ ನಲವಡಿ, ರಾಜೆಸಾಬ ಅಣ್ಣಿಗೇರಿ, ಜಾಕೀರ ಬಾಗಲಕೋಟ ಸೇರಿ ಹಲವರು ಉಪಸ್ಥಿತರಿದ್ದರು.

### ಸಾಂಪ್ರದಾಯಿಕ ಮೆರವಣಿಗೆ

ಗದಗ: ಭೂಮರಡ್ಡಿ ವೃತ್ತದಿಂದ ಸಮಾವೇಶ ನಡೆಯುವ ಆಂಗ್ಲೋ ಸ್ಕೂಲ್ ಮೈದಾನದವರೆಗೆ ಹೆಜ್ಜೆ ಮೇಳ, ಜಾಂಜ್ ಮೇಳ, ಕರಡಿ ಮಜಲುಗಳ ಮೂಲಕ ಮೆರವಣಿಗೆಯು ನಡೆಯಿತು. ಸಂಘದ ರಾಜ್ಯಾಧ್ಯಕ್ಷ ಜಲೀಲಸಾಬ ಅವರು ಚಾಲನೆ ನೀಡಿದರು. ಈ ವೇಳೆ ಸಮಾಜ ಬಾಂಧವರು, ಯುವಕರು ಭಾಗವಹಿಸಿದ್ದರು.